# ಅಜಿತ್ ಕಿತಾಪತಿಗೆ ಕನ್ನಡಿಗರ ತಪರಾಕಿ

## ಮಹಾರಾಷ್ಟ್ರ ಡಿಸಿಎಂ ಅಜಿತ್ ಪವಾರ್ ಹೇಳಿಕೆಗೆ ಭುಗಿಲೆದ್ದ ಆಕ್ರೋಶ, ವ್ಯಾಪಕ ಖಂಡನೆ

ಚಿಕ್ಕೋಡಿ: ರಾಜ್ಯದ ಗಡಿ ಭಾಗದ ಬೆಳಗಾವಿ, ನಿಪ್ಪಾಣಿ ಹಾಗೂ ಕಾರವಾರ ಮಹಾರಾಷ್ಟ್ರಕ್ಕೆ ಸೇರಿದ್ದು ಎನ್ನುವ ಮೂಲಕ ಮಹಾರಾಷ್ಟ್ರದ ಉಪಮುಖ್ಯಮಂತ್ರಿ ಅಜಿತ್ ಪವಾರ್ ಕನ್ನಡಿಗರನ್ನು ಕೆಣಕುವ ಹೇಳಿಕೆ ನೀಡಿರುವುದಕ್ಕೆ ಸಿಎಂ ಯಡಿಯೂರಪ್ಪ ಸೇರಿ ಸಚಿವರು ಹಾಗೂ ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಇವು ಕರ್ನಾಟಕ ರಾಜ್ಯದ ಅವಿಭಾಜ್ಯ ಅಂಗಗಳು. ಬೆಳಗಾವಿ, ನಿಪ್ಪಾಣಿ, ಕಾರವಾರ ಮಹಾರಾಷ್ಟ್ರಕ್ಕೆ ಸೇರುತ್ತವೆ ಎಂದು ಅಜಿತ್ ಪವಾರ ಅನವಶ್ಯಕ ಹೇಳಿಕೆ ನೀಡಿ ವಿವಾದ ಹುಟ್ಟು ಹಾಕಿ ಕನ್ನಡಿಗರನ್ನು ಕೆರಳಿಸುತ್ತಿರುವುದು ಅವರ ಹುದ್ದೆಗೆ ಶೋಭೆ ತರುವುದಲ್ಲ ಎನ್ನುವ ಆಕ್ರೋಶದ ಮಾತುಗಳು ಗಡಿ ಭಾಗದಲ್ಲಿ ಕೇಳಿ ಬಂದಿವೆ.

### ಅನಗತ್ಯ ಕ್ಯಾತೆ: ಸಿಎಂ



ಬೆಂಗಳೂರು: ಕರ್ನಾಟಕದಲ್ಲಿ ಕನ್ನಡಿಗರಂತೆ ಇರುವ ಮರಾಠಿಗರ ಅಭಿವೃದ್ಧಿಗಾಗಿ ಪ್ರಾಧಿಕಾರ ರಚನೆ ಮಾಡಿದ್ದೇವೆ. ಇದರಲ್ಲಿ ಯಾವುದೇ ಗೊಂದಲ ಇಲ್ಲ. ಗೊಂದಲ ಸೃಷ್ಟಿಸಿ, ಕರ್ನಾಟಕ ಬಂದ್ ಮಾಡಲು ಅವಕಾಶ ನೀಡುವುದಿಲ್ಲ ಎಂದು ಸಿಎಂ ಯಡಿಯೂರಪ್ಪ ಎಚ್ಚರಿಕೆ ನೀಡಿದ್ದಾರೆ. ಬುಧವಾರ ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯ ಸರ್ಕಾರ ಮರಾಠ ಅಭಿವೃದ್ಧಿ ಪ್ರಾಧಿಕಾರ ರಚನೆ ಮಾಡಿರುವ ಬಗ್ಗೆ ಮಹಾರಾಷ್ಟ್ರದ ಡಿಸಿಎಂ ಅಜಿತ್ ಪವಾರ್ ಅನಗತ್ಯವಾಗಿ ಕ್ಯಾತೆ ತೆಗೆದು, ಗೊಂದಲ ಉಂಟು ಮಾಡುತ್ತಿದ್ದಾರೆ. ಈಗಾಗಲೇ ಮಹಾಜನ್ ಆಯೋಗದ ಅಂತಿಮ ತೀರ್ಪಿನಂತೆ ಮರಾಠಿಗರು ನಮ್ಮ ರಾಜ್ಯದ ಕನ್ನಡಿಗರಂತೆಯೇ ಇದ್ದಾರೆ. ಮರಾಠರ ಅಭಿವೃದ್ಧಿಗಾಗಿ ಪ್ರಾಧಿಕಾರ ಮಾಡಿದ್ದೇವೆ. ಮರಾಠಿಗರು ಕಟ್ಟಾ ಹಿಂದುತ್ವವಾದಿಗಳಾಗಿದ್ದಾರೆ ಎಂದು ಹೇಳಿದರು.

### ಪ್ರಧಾನಿ ಮಧ್ಯಸ್ಥಿಕೆ ವಹಿಸಲಿ



ಕೂಡಲಸಂಗಮ: ಅಜಿತ್ ಪವಾರ ವಿವಾದಾತ್ಮಕ ಹೇಳಿಕೆ ಕೊಡುವುದರ ಮೂಲಕ ಸಾಮರಸ್ಯಕ್ಕೆ ಧಕ್ಕೆ ಉಂಟು ಮಾಡುತ್ತಿದ್ದಾರೆ. ಗಡಿ ವಿವಾದವನ್ನು ಸೌಹಾರ್ದದಿಂದ ಬಗೆಹರಿಸಲು ಎರಡೂ ರಾಜ್ಯದ ಸಿಎಂಗಳೊಂದಿಗೆ ಸಂಧಾನ ಮಾಡಲು ಪ್ರಧಾನಿ ಮೋದಿ ಮಧ್ಯಸ್ಥಿಕೆ ವಹಿಸಬೇಕು ಎಂದು ಕೂಡಲಸಂಗಮ ಲಿಂಗಾಯತ ಪಂಚಮಸಾಲಿ ಪೀಠದ ಜಗದ್ಗುರು ಬಸವಜಯ ಮೃತ್ಯುಂಜಯ ಸ್ವಾಮೀಜಿ ಆಗ್ರಹಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿ, ನ.1ರಂದು ಬೆಳಗಾವಿಯಲ್ಲಿ ಕೆಲ ಸಂಘಟನೆಗಳು ಕಪ್ಪು ಬಾವುಟ ಪ್ರದರ್ಶನ ಮಾಡಿರುವುದು ಆಕ್ರೋಶಕ್ಕೆ ಕಾರಣವಾಗಿದೆ. ಈ ವಿವಾದಕ್ಕೆ ತೆರೆ ಎಳೆಯುವ ಕಾರ್ಯಕ್ಕೆ ಪ್ರಧಾನಿಗಳು ಮಧ್ಯಸ್ಥಿಕೆ ವಹಿಸುವುದು ಸೂಕ್ತ ಎಂದರು.

### ಅಜಿತ್ ಹೇಳಿದ್ದೇನು?



ಮುಂಬೈ: ಮಹಾರಾಷ್ಟ್ರ ಡಿಸಿಎಂ ಅಜಿತ್ ಪವಾರ್, ಮರಾಠಿ ಭಾಷಿಕರಿರುವ ಕರ್ನಾಟಕದ ಪ್ರದೇಶಗಳನ್ನು ಮಹಾರಾಷ್ಟ್ರದ ಭಾಗವಾಗಿಸಬೇಕು ಎಂದು ಹೇಳಿ ವಿವಾದ ಹುಟ್ಟುಹಾಕಿದ್ದಾರೆ. ಶಿವಸೇನೆ ಸಂಸ್ಥಾಪಕ ಬಾಳಾ ಠಾಕ್ರೆಯ ಪುಣ್ಯತಿಥಿಯಂದು ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಪವಾರ್, ಬಾಳಾ ಠಾಕ್ರೆ ತಮ್ಮ ಜೀವಮಾನದುದ್ದಕ್ಕೂ ಬೆಳಗಾವಿ, ಕಾರವಾರ ಮತ್ತು ನಿಪ್ಪಾಣಿಯನ್ನು ಮಹಾರಾಷ್ಟ್ರದ ಭಾಗವಾಗಿಸುವ ಕನಸು ಕಂಡಿದ್ದರು. ನಾವೆಲ್ಲರೂ ಅವರ ಕನಸನ್ನು ಈಡೇರಿಸಲು ಮುಂದಾಗಬೇಕಿದೆ ಎಂದು ಹೇಳಿದ್ದಾರೆ.

ಮಹಾರಾಷ್ಟ್ರದ ಡಿಸಿಎಂ ಅಜಿತ್ ಪವಾರ ಮಾನಸಿಕ ಸ್ಥಿಮಿತ ಕಳೆದುಕೊಂಡಿದ್ದಾರೆ. ರಾಜ್ಯದ



ಗಡಿ ಭಾಗದ ಬೆಳಗಾವಿ, ನಿಪ್ಪಾಣಿ ಕರ್ನಾಟಕದ ಕಿರೀಟ ಇದ್ದ ಹಾಗೆ. ಅಜಿತ್ ಪವಾರ ಈ ಮೊದಲು ಇಂತಹ ಎಷ್ಟೋ ಹೇಳಿಕೆ ಕೊಟ್ಟಿದ್ದಾರೆ. ರಾಜ್ಯದಲ್ಲಿ ರಾಜಾಹುಲಿ ಯಡಿಯೂರಪ್ಪ ಸರ್ಕಾರ ಇದೆ ಎನ್ನುವುದನ್ನು ಪ್ರಜ್ಞೆಯಲ್ಲಿ ಇಟ್ಟುಕೊಳ್ಳಬೇಕು.

– ಪಿ.ರಾಜೀವ, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷ

ಮಹಾರಾಷ್ಟ್ರ ಡಿಸಿಎಂ ಅಜಿತ್ ಪವಾರ್ ಏನ್ ಹೇಳಿದ್ದಾರೆ



ಅನ್ನೋದು ನನಗೆ ಗೊತ್ತಿಲ್ಲ. ಕರ್ನಾಟಕ ಮಾತೆ ನಮ್ಮ ತಾಯಿ. ಅವರಿಗೆ ಏನೂ ಸಂಬಂಧವಿಲ್ಲ. ಅವರ ಮಾತಿಗೆ ಯಾವುದೇ ಬೆಲೆ ಕೊಡುವ ಅವಶ್ಯಕತೆ ಇಲ್ಲ.

– ಪ್ರಭು ಚವ್ಹಾಣ, ಪಶುಸಂಗೋಪನಾ ಸಚಿವ

ಕಾರವಾರ, ನಿಪ್ಪಾಣಿಯನ್ನು ಮಹಾರಾಷ್ಟ್ರಕ್ಕೆ ಸೇರಿಸಬೇಕೆಂಬ ಹೇಳಿಕೆಯನ್ನು ಅಜಿತ್



ಪವಾರ್ ಆಗಾಗ ನೀಡುತ್ತಿರುತ್ತಾರೆ. ಅದಕ್ಕೆ ಬೆಲೆ ಕೊಡಬೇಕಿಲ್ಲ. ಬೆಳಗಾವಿ ಜಿಲ್ಲೆಯವರೇ ಆದ ನಾಲ್ವರು ಸಚಿವರಿದ್ದಾರೆ. ಗಡಿ ಉಸ್ತುವಾರಿ ಸಚಿವರ ನೇಮಕ ಕುರಿತು ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಸಿಎಂ ಯಡಿಯೂರಪ್ಪ ನಿರ್ಧಾರ ಮಾಡುತ್ತಾರೆ.

– ಎಸ್.ಟಿ.ಸೋಮಶೇಖರ್, ಸಹಕಾರ ಸಚಿವ

ಸುಪ್ರೀಂ ಕೋರ್ಟ್‌ನಲ್ಲಿ ಕೇಸ್ ಇರುವಾಗ ಈ ರೀತಿ ಮಾತನಾಡುವುದು



ತಪ್ಪು. ನಮ್ಮ ಅಖಂಡತೆಯನ್ನು ಸಮ್ಮದಾಗಿಟ್ಟುಕೊಳ್ಳಲು ನಮ್ಮ ಪ್ರಯತ್ನ ಇದೆ. ಮಹಾ ಡಿಸಿಎಂ ಪವಾರ್ ಏನೇ ಹೇಳಿದ್ರು ಅವರಿಗೆ ಬಿಟ್ಟಿದ್ದು. ಅವರ ಹೇಳಿಕೆಯಿಂದ ನಮ್ಮ ನಮ್ಮಲ್ಲಿ ಜಗಳವಾಗಬಾರದು.

– ಶಶಿಕಲಾ ಜೊಲ್ಲೆ, ಮಹಿಳಾ,ಮಕ್ಕಳ ಕಲ್ಯಾಣ ಸಚಿವೆ


ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE